ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ : ಸಿ7(2):ಖಾ.ಶಾ.ವ.ಪ್ರ.ಮೇಲು.ಸಹಿ:2016-17 ದಿನಾಂಕ : 25.05.2016

**ಸುತ್ತೋಲೆ**

ವಿಷಯ: ರಾಜ್ಯದ ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳು ಬೇರೆ ಶಾಲೆಗಳಿಗೆ ಪ್ರವೇಶ ಪಡೆಯಲು ಹಾಗೂ ಉತ್ತೀರ್ಣರಾದ ವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕಾಗಿ ಬೇರೆ ಶಾಲಾ ಕಾಲೇಜುಗಳಿಗೆ ಸೇರಲು ಸಂಬಂಧ ಪಟ್ಟ ಶಾಲೆಗಳು ವಿತರಿಸಿದ ವರ್ಗಾವಣೆ ಪತ್ರಗಳನ್ನು ಮೇಲುಸಹಿ ಮಾಡುವ ಕುರಿತು.

*******

ರಾಜ್ಯದ ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳು ಬೇರೆ ಶಾಲೆಗಳಿಗೆ ಪ್ರವೇಶ ಪಡೆಯಲು ಹಾಗೂ ಉತ್ತೀರ್ಣರಾದ ವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕಾಗಿ ಬೇರೆ ಶಾಲಾ ಕಾಲೇಜುಗಳಿಗೆ ಸೇರಲು ಸಂಬಂಧ ಪಟ್ಟ ಶಾಲೆಗಳು ವಿತರಿಸಿದ ವರ್ಗಾವಣೆ ಪತ್ರಗಳನ್ನು ಮೇಲುಸಹಿ ಮಾಡುವುದು ವಿಳಂಬವಾಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿವೆ. ಮಾರ್ಚ್/ಏಪ್ರಿಲ್ 2016ರಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕಾಗಿ ಕಾಲೇಜುಗಳಿಗೆ ಪ್ರವೇಶ ಪಡೆಯಲು ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಖಾಸಗಿ ಶಾಲೆಗಳಿಂದ ವರ್ಗಾವಣೆ ಪತ್ರಗಳನ್ನು ಪಡೆದು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮೇಲು ಸಹಿಗಾಗಿ ಸಲ್ಲಿಸುತ್ತಿದ್ದಾರೆ.

ಈ ಸಂಬಂಧ ಸಂಬಂಧ ಪಟ್ಟ ಶಾಲಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಮಾನ್ಯತೆ ಕುರಿತು ಪರಿಶೀಲಿಸಿ ತ್ವರಿತವಾಗಿ ವಿದ್ಯಾರ್ಥಿಗಳ ವರ್ಗಾವಣೆ ಪತ್ರಗಳಿಗೆ ಮೇಲುಸಹಿ ಮಾಡದೇ ವಿಳಂಬವಾಗುತ್ತಿರುವುದರಿಂದ ವಿದ್ಯಾರ್ಥಿಗಳು ಹಾಗೂ ಪೋಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಹಲವಾರು ಬಾರಿ ಭೇಟಿ ನೀಡುತ್ತಿರುವುದು ಗಮನಕ್ಕೆ ಬಂದಿರುತ್ತದೆ.

ವಿದ್ಯಾರ್ಥಿಗಳು ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಶಾಲೆಯಿಂದ ಬೇರೆ ಶಾಲೆಗೆ ಸೇರಲು ಇಚ್ಛಿಸಿ ವರ್ಗಾವಣೆ ಪತ್ರವನ್ನು ಪಡೆದು ಮೇಲುಸಹಿ ಸಲ್ಲಿಸಿದಲ್ಲಿ ಹಾಗೂ ಉನ್ನತ ವ್ಯಾಸಂಗಕ್ಕಾಗಿ ಪ್ರಸ್ತುತ ಉತ್ತೀರ್ಣವಾದ ಶಾಲೆಯಿಂದ ವರ್ಗಾವಣೆ ಪತ್ರವನ್ನು ಪಡೆದು ಮೇಲು ಸಹಿಗಾಗಿ ಸಲ್ಲಿಸಿದಲ್ಲಿ ವರ್ಗಾವಣೆ ಪತ್ರದ ನೈಜತೆ ಹಾಗೂ ವ್ಯಾಸಂಗ ಮಾಡಿದ ಶಾಲೆಯ ಮಾನ್ಯತೆಯ ಬಗ್ಗೆ ಪರಿಶೀಲಿಸಿ ಅದೇ ದಿನ ವರ್ಗಾವಣೆ ಪತ್ರಗಳಿಗೆ ಮೇಲುಸಹಿ ಮಾಡಿ ಕೂಡಲೇ ವಿದ್ಯಾರ್ಥಿ/ ಪೋಷಕರಿಗೆ ನೀಡಲು ಕ್ರಮವಹಿಸುವಂತೆ ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿಸಿದೆ ಹಾಗೂ ಈ ಸಂಬಂಧ ಸಂಬಂಧ ಪಟ್ಟ ಜಿಲ್ಲಾ ಉಪನಿರ್ದೇಶಕರು ಅನುಪಾಲನೆ ಮಾಡಲು ಸೂಚಿಸಿದೆ.

(ಡಾ|| ಪಿ.ಸಿ.ಜಾಫರ್, ಭಾ.ಆ.ಸೇ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

24/5/16

ಗೆ:
1] ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2] ರಾಜ್ಯ ಎಲ್ಲಾ ಉಪನಿರ್ದೇಶಕರಿಗೆ ಸೂಕ್ತ ಕ್ರಮಕ್ಕಾಗಿ.

Scanned by CamScanner